**ದಿನಾಂಕ 07.05.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 1** ಎಂದು, ದೂರಿನ ದೃಢೀಕೃತ ಪ್ರತಿಯನ್ನು **ನಿಪಿ 2** ಎಂದು, ಸ್ಥಳ ಪಂಚನಾಮೆಯ ದೃಢೀಕೃತ ಪ್ರತಿಯನ್ನು **ನಿಪಿ 3** ಎಂದು, ಅಮಾನತ್ತು ಪಂಚನಾಮೆಯ ದೃಢೀಕೃತ ಪ್ರತಿಯನ್ನು **ನಿಪಿ 4** ಎಂದು, ನಕ್ಷೆಯ ದೃಢೀಕೃತ ಪ್ರತಿಯನ್ನು **ನಿಪಿ 5** ಎಂದು, ಐಎಮ್‌ವಿ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 6** ಎಂದು, ಗಾಯದ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು **ನಿಪಿ 7** ಎಂದು, ಮೋಟಾರು ವಾಹನ ಕಯ್ದೆಯ ಕಲಂ 133 ರಡಿ ನೀಡಿರುವ ನೋಟೀಸು ಮತ್ತು ಸದರಿ ನೋಟೀಸಿಗೆ ನೀಡಿರುವ ಉತ್ತರದ ದೃಢೀಕೃತ ಪ್ರತಿಗಳನ್ನು ಕ್ರಮವಾಗಿ **ನಿಪಿ 8 ಮತ್ತು 9** ಎಂದು, ದೋಷಾರೋಪಣ ಪಟ್ಟಿಯ ದೃಢೀಕೃತ ಪ್ರತಿಯನ್ನು **ನಿಪಿ 10** ಎಂದು, ಮೆಡಿಕಲ್ ಬಿಲ್ಲುಗಳನ್ನು **ನಿಪಿ 11** ಎಂದು, ವೈದ್ಯರ ಸಲಹಾ ಚೀಟಿಯನ್ನು **ನಿಪಿ 12** ಎಂದು, ಎರಡು ವೈದ್ಯಕೀಯ ಪ್ರಮಾಣ ಪತ್ರಗಳನ್ನು **ನಿಪಿ 13** ಎಂದು, ಲ್ಯಾಬ್ ವರದಿಗಳನ್ನು **ನಿಪಿ 14** ಎಂದು, ನೇಮಕಾತಿ ಆದೇಶ, ಗುರುತಿನ ಚೀಟಿ, ಚಾಲನಾ ಪರವಾನಗಿ ಮತ್ತು ಆಧಾರ್ ಕಾರ್ಡಿನ ನೋಟರಿ ಪ್ರತಿ(ಮೂಲ ದಾಖಲಾತಿಯೊಂದಿಗೆ ಹೋಲಿಕೆ ಮಾಡಿ ಮೂಲ

ದಾಖಲಾತಿಯನ್ನು ಹಿಂದಿರುಗಿಸಲಾಯಿತು)ಗಳನ್ನು ಕ್ರಮವಾಗಿ **ನಿಪಿ 15** ರಿಂದ **18** ಎಂದು, ಕ್ಷ-ಕಿರಣವನ್ನು **ನಿಪಿ 19** ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ಸಮಯ ನೀಡಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**